For More Job News Visit : www.kscvaani.com

ಆಡಳಿತಾಧಿಕಾರಿ ನೇಮಕಕ್ಕೆ ಅರ್ಜಿ

ಬಾಗಲಕೋಟೆ: ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ವೈದ್ಯಕೀಯ, ಪೊಲೀಸ್, ಕಾನೂನು ಸೇವೆ, ಸಮಾಲೋಚನೆ ಮತ್ತು ತಾತ್ಕಾಲಿಕ ವಸತಿ ಒದಗಿಸುವ ಉದ್ದೇಶ ಹೊಂದಿರುವ ಸಖಿ ಕೇಂದ್ರಕ್ಕೆ ಘಟಕ ಆಡಳಿತಾಧಿಕಾರಿ ಹುದ್ದೆಗೆ ಮಾಸಿಕ ಗೌರಧನವನ್ನಾಧರಿಸಿ ಗುತ್ತಿಗೆ, ಹೊರಗುತ್ತಿಗೆ ಮೇಲೆ 11 ತಿಂಗಳ ಅವಧಿಗೆ ತಾತ್ಕಾಲಿಕವಾಗಿ ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು ಎಂ.ಎಸ್. ಡಬ್ಲ್ಯು, ಮಾಸ್ಟರ್ ಇನ್ ಲಾ, ಎಂ.ಎಸ್ಸಿ ಹೋಂ ಸೈನ್ಸ್, ಇಲ್ಲವೇ ಎಂ.ಎಸ್ಸಿ ಸೈಕಾಲಜಿಗಳಲ್ಲಿ ವಿದ್ಯಾರ್ಹತೆ ಹೊಂದಿರಬೇಕು. ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಭವನ, ನವನಗರ ಬಾಗಲಕೋಟೆ ದೂರವಾಣಿ ಸಂಖ್ಯೆ: 08354-235708 ಇವರನ್ನು ಸಂಪರ್ಕಿಸಬಹುದಾಗಿದೆ.

ಭರ್ತಿ ಮಾಡಿದ ಅರ್ಜಿ ಫೆಬ್ರವರಿ 15 ರೊಳಗಾಗಿ ಸಲ್ಲಿಸುವಂತೆ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.